All India Radio: Bangalore
National Bulletin In Kannada
19.12.2025  19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಸಂಸತ್ತಿನ ಉಭಯ ಸದನಗಳು ಅಧಿವೇಶನ ಮುಕ್ತಾಯ ಎರಡೂ ಸದನಗಳು ಅನಿರ್ಧಿಷ್ಟಾವದಿಗೆ ಮುಂದೂಡಿಕೆ
- ಪ್ರಧಾನಿ ನರೇಂದ್ರ ಮೋದಿ ಜೋರ್ಡಾನ್-ಇಥಿಯೋಪಿಯಾ-ಓಮನ್ ಭೇಟಿ ಅಂತ್ಯ : ಹಲವು ಒಪ್ಪಂಗಳಿಗೆ ಸಹಿ
- ಮದ್ರಾಸ್-ಹೈಕೋರ್ಟ್ ನ್ಯಾಯಾಧೀಶರ ವಿರುದ್ಧ ಮಹಾಭಿಯೋಗ ನಿರ್ಣಯ, ಪರಿಶೀಲನೆಯಲ್ಲಿ - ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ
- ೧೯ ವರ್ಷದ ಒಳಗಿನ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ : ಸೆಮಿಫೈನಲ್‌ನಲ್ಲಿ ಶ್ರೀಲಂಕಾ ವಿರುದ್ಧ ಭಾರತಕ್ಕೆ ೮ ವಿಕೆಟ್‌ಗಳ ಜಯ

<><><><>

ಸಂಸತ್ತಿನ ಎರಡೂ ಸದನಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಯಿತು. ಈ ತಿಂಗಳ ೧ ರಂದು ಪ್ರಾರಂಭವಾದ ಈ ೧೯ ದಿನಗಳ ಚಳಿಗಾಲದ ಅಧಿವೇಶನ ಇಂದು ಮುಕ್ತಾಯಗೊಂಡಿತು. ತಮ್ಮ ಸಮಾರೋಪ ಭಾಷಣದಲ್ಲಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಸದನದ ಉತ್ಪಾದಕತೆ ಸುಮಾರು ಶೇಕಡಾ ೧೧೧ ರಷ್ಟಿದೆ. ಒಟ್ಟು ಸದನದ ೧೫ ಕಲಾಪಗಳು ನಡೆದಿವೆ. ಸದನದ ಸುಗಮ ನಡವಳಿಕೆಗೆ ಸಹಕರಿಸಿದ್ದಕ್ಕಾಗಿ ಅವರು ಎಲ್ಲಾ ಸದಸ್ಯರಿಗೆ ಧನ್ಯವಾದಗಳನ್ನು ಅರ್ಪಿಸಿದರು. ತಮ್ಮ ಸಮಾರೋಪ ಭಾಷಣದಲ್ಲಿ ರಾಜ್ಯಸಭೆಯ ಅಧ್ಯಕ್ಷ ಸಿ.ಪಿ. ರಾಧಾಕೃಷ್ಣನ್ ಅವರು ಸದನವು ಸುಮಾರು ೯೨ ಗಂಟೆಗಳ ಕಾಲ ಕಾರ್ಯನಿರ್ವಹಿಸಿತು ಮತ್ತು ಶೇಕಡಾ ೧೨೧ ರಷ್ಟು ಉತ್ಪಾದಕತೆಯನ್ನು ದಾಖಲಿಸಿದೆ ಎಂದು ಹೇಳಿದರು. ಅಧಿವೇಶನವು ಐತಿಹಾಸಿಕ ಮತ್ತು ಪ್ರಜಾಪ್ರಭುತ್ವ ಮಹತ್ವದ ವಿಷಯಗಳ ಕುರಿತು ಉತ್ತಮ ಗುಣಮಟ್ಟದ ಚರ್ಚೆಗಳು ಮತ್ತು ಚರ್ಚೆಯಿಂದ ಗುರುತಿಸಲ್ಪಟ್ಟಿದೆ ಎಂದು ಅವರು ಹೇಳಿದರು.

<><><><>

ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಅಂಗೀಕರಿಸಲಾದ ಮಸೂದೆಗಳು ಕೋಟ್ಯಂತರ ಜನರ ಜೀವನವನ್ನು ಸುಧಾರಿಸುವಲ್ಲಿ ಮತ್ತು ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ನವದೆಹಲಿಯಲ್ಲಿ ಚಳಿಗಾಲದ ಅಧಿವೇಶನ ಮುಗಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸತ್ತಿನ ಚಳಿಗಾಲದ ಅಧಿವೇಶನವು ದೇಶಕ್ಕೆ ಬಹಳ ಉತ್ಪಾದಕವಾಗಿದೆ. ಚುನಾವಣಾ ಸುಧಾರಣೆಗಳ ಕುರಿತು ಪ್ರತ್ಯೇಕ ಚರ್ಚೆ ನಡೆದಿರುವುದು ಇದೇ ಮೊದಲು ಎಂದು ಅವರು ಹೇಳಿದರು.

ಧ್ವನಿ : ಕಿರಣ್ ರಿಜಿಜು (೨೩ ಸೆಕೆಂಡ್‌ಗಳು)

<><><><>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಇಂದು ಚಳಿಗಾಲದ ಅಧಿವೇಶನ ಮುಗಿದ ನಂತರ ಸಂಸತ್ತಿನ ತಮ್ಮ ಕೊಠಡಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಸಂಸತ್ ಸದಸ್ಯರನ್ನು ಭೇಟಿಯಾದರು. ಸಭೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅರ್ಜುನ್ ರಾಮ್ ಮೇಘವಾಲ್ ಮತ್ತು ಕೆ. ರಾಮಮೋಹನ್ ನಾಯ್ಡು, ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ, ಎನ್‌ಸಿಪಿ ಸಂಸದೆ ಸುಪ್ರಿಯಾ ಸುಳೆ, ಸಮಾಜವಾದಿ ಪಕ್ಷದ ಸಂಸದ ಧರ್ಮೇಂದ್ರ ಯಾದವ್, ಎಲ್‌ಜೆಪಿ ಮುಖ್ಯಸ್ಥ ಚಿರಾಗ್ ಪಾಸ್ವಾನ್ ಮತ್ತು ಇತರ ಹಲವಾರು ಸಂಸದರು ಉಪಸ್ಥಿತರಿದ್ದರು.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಜೋರ್ಡಾನ್, ಇಥಿಯೋಪಿಯಾ ಮತ್ತು ಓಮನ್‌ಗೆ ತಮ್ಮ ಮೂರು ರಾಷ್ಟ್ರಗಳ ಭೇಟಿಯನ್ನು ನಿನ್ನೆ ಮುಗಿಸಿದರು. ತಮ್ಮ ಮೂರು ರಾಷ್ಟ್ರಗಳ ಪ್ರವಾಸದ ಕೊನೆಯ ಹಂತದಲ್ಲಿ, ಭಾರತ ಮತ್ತು ಓಮನ್ ನಿನ್ನೆ ಹಲವಾರು ಒಪ್ಪಂದಗಳಿಗೆ ಸಹಿ ಹಾಕಿದವು. ಭಾರತ-ಓಮನ್ ಸಂಬಂಧಗಳಿಗೆ ಮತ್ತು ಅವರ ದೂರದೃಷ್ಟಿಯ ನಾಯಕತ್ವಕ್ಕೆ ನೀಡಿದ ಅಸಾಧಾರಣ ಕೊಡುಗೆಗಾಗಿ ಓಮನ್ ಸುಲ್ತಾನ್ ಹೈತಮ್ ಬಿನ್ ತಾರಿಕ್ ಅವರು, ಪ್ರಧಾನಿ ನರೇಂದ್ರ ಮೋದಿ ಅವರಿಗೆ 'ಆರ್ಡರ್ ಆಫ್ ಓಮನ್' ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಇದಕ್ಕೂ ಮೊದಲು, ಇಥಿಯೋಪಿಯನ್ ಪ್ರಧಾನಿ ಡಾ. ಅಬಿಯ್ ಅಹ್ಮದ್ ಅಲಿ ಅವರೊಂದಿಗಿನ ದ್ವಿಪಕ್ಷೀಯ ಪಾಲುದಾರಿಕೆಯನ್ನು ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಲು ನಿರ್ಧರಿಸಿದರು. ಇಥಿಯೋಪಿಯಾದ ಪ್ರಧಾನಿಯವರು ಪ್ರಧಾನಿ ಮೋದಿಯವರಿಗೆ ಇಥಿಯೋಪಿಯಾದ ಅತ್ಯುನ್ನತ

ಪ್ರಶಸ್ತಿಯಾದ 'ಗ್ರೇಟ್ ಆನರ್ ನಿಶಾನ್ ಆಫ್ ಇಥಿಯೋಪಿಯಾ'ವನ್ನು ಪ್ರದಾನ ಮಾಡಿದರು. ಜೋರ್ಡಾನ್‌ನಲ್ಲಿ, ಪ್ರಧಾನಿ ನರೇಂದ್ರ ಮೋದಿ ಐದು ವರ್ಷಗಳ ಅವಧಿಯಲ್ಲಿ ದ್ವಿಪಕ್ಷೀಯ ವ್ಯಾಪಾರವನ್ನು ೫ ಬಿಲಿಯನ್ ಡಾಲರ್‌ಗಳಿಗೆ ದ್ವಿಗುಣಗೊಳಿಸುವ ಪ್ರಸ್ತಾಪವನ್ನು ಮಂಡಿಸಿದರು.

<><><>

ವಿರೋಧ ಪಕ್ಷದ ಸಂಸದರು ಮಂಡಿಸಿದ ನಿಯಮಗಳು ಮತ್ತು ಕಾರ್ಯವಿಧಾನದ ಪ್ರಕಾರ ಮದ್ರಾಸ್ ಹೈಕೋರ್ಟ್‌ನ ನ್ಯಾಯಾಧೀಶರ ವಿರುದ್ಧದ ಮಹಾಭಿಯೋಗ ನಿರ್ಣಯವನ್ನು ಪರಿಶೀಲಿಸುತ್ತಿರುವುದಾಗಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಇಂದು ಹೇಳಿದ್ದಾರೆ. ಡಿಎಂಕೆ ಮತ್ತು ಇತರ ವಿರೋಧ ಪಕ್ಷಗಳ ಸಂಸತ್ ಸದಸ್ಯರು ಮದ್ರಾಸ್ ಹೈಕೋರ್ಟ್ ನ್ಯಾಯಾಧೀಶ ನ್ಯಾಯಮೂರ್ತಿ ಜಿ.ಆರ್. ಸ್ವಾಮಿನಾಥನ್ ಅವರ ಮಹಾಭಿಯೋಗ ನಿರ್ಣಯವನ್ನು ಕೋರಿ ಲೋಕಸಭೆ ಸ್ಪೀಕರ್ ಅವರ ಮುಂದೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. ನ್ಯಾಯಮೂರ್ತಿ ಸ್ವಾಮಿನಾಥನ್ ಇತ್ತೀಚೆಗೆ ಭಕ್ತರು ದರ್ಗಾದ ಬಳಿಯ ತಿರುಪ್ಪರಂಕುಂದ್ರಂ ಬೆಟ್ಟದ ಮೇಲಿನ ಕಲ್ಲಿನ ಕಂಬದ ಮೇಲೆ ದೀಪ ಹಚ್ಚಲು ಅನುಮತಿ ನೀಡಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ನಾಳೆ ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಅವರು, ನಾಡಿಯಾ ಜಿಲ್ಲೆಯ ರಾಣಾಘಾಟ್‌ನಲ್ಲಿ ಸುಮಾರು ೩ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಎರಡು ರಾಷ್ಟ್ರೀಯ ಹೆದ್ದಾರಿ ಯೋಜನೆಗಳನ್ನು ಉದ್ಘಾಟಿಸಿ ಶಿಲಾನ್ಯಾಸ ಮಾಡಲಿದ್ದಾರೆ. ಈ ಯೋಜನೆಗಳು ಕೋಲ್ಕತ್ತಾ ಮತ್ತು ಸಿಲಿಗುರಿ ನಡುವಿನ ಪ್ರಮುಖ ಸಂಪರ್ಕ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತವೆ. ಬಳಿಕ ಅವರು, ಎರಡು ದಿನಗಳ ಅಸ್ಸಾಂ ಭೇಟಿಯನ್ನು ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ ಲೋಕಪ್ರಿಯ ಗೋಪಿನಾಥ್ ಬಾರ್ಡೋಲೋಯ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ತಮ್ಮ ಭೇಟಿಯ ಕೊನೆಯ ದಿನದಂದು ಅವರು, ಗುವಾಹಟಿಯ ಬೋರಗಾಂವ್‌ನಲ್ಲಿರುವ ಸ್ವಹಿದ್ ಸ್ಮಾರಕ ಕ್ಷೇತ್ರದಲ್ಲಿ ಐತಿಹಾಸಿಕ ಅಸ್ಸಾಂ ಚಳವಳಿಯ ಹುತಾತ್ಮರಿಗೆ ಗೌರವ ಸಲ್ಲಿಸಲಿದ್ದಾರೆ. ನಂತರ, ಪ್ರಧಾನಿ ಅಸ್ಸಾಂ ಕಣಿವೆ ರಸಗೊಬ್ಬರ ಮತ್ತು ರಾಸಾಯನಿಕ ಕಂಪನಿ ಲಿಮಿಟೆಡ್‌ನ ಅಮೋನಿಯಾ-ಯೂರಿಯಾ ಯೋಜನೆಗಾಗಿ ಭೂಮಿ ಪೂಜೆಯನ್ನು ನೆರವೇರಿಸಲಿದ್ದಾರೆ.

<><><>

ದ್ವಿಪಕ್ಷೀಯ ಮಟ್ಟದಲ್ಲಿ ಮತ್ತು ಯುರೋಪಿಯನ್ ಒಕ್ಕೂಟದೊಳಗಿನ ಪ್ರಮುಖ ದೇಶವಾಗಿ ನೆದರ್‌ಲ್ಯಾಂಡ್ಸ್ ಜೊತೆಗಿನ ಸಂಬಂಧಗಳಿಗೆ ಭಾರತ ಹೆಚ್ಚಿನ ಮೌಲ್ಯವನ್ನು ನೀಡುತ್ತದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ನೆದರ್‌ಲ್ಯಾಂಡ್ಸ್ ವಿದೇಶಾಂಗ ಸಚಿವ ಡೇವಿಡ್ ವ್ಯಾನ್ ವೀಲ್ ಅವರೊಂದಿಗಿನ ಸಭೆಯ ನಂತರ ಮಾತನಾಡಿದ ಅವರು, ಕಳೆದ ಕೆಲವು ತಿಂಗಳುಗಳಲ್ಲಿ ಹಲವಾರು ಪ್ರಮುಖ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ. ಇದು ಎರಡೂ ದೇಶಗಳ ನಡುವಿನ ಸಹಕಾರಕ್ಕೆ ಹೆಚ್ಚಿನ ಆಯಾಮಗಳನ್ನು ನೀಡುತ್ತದೆ. ಕೃಷಿ, ಆರೋಗ್ಯ, ವಿಜ್ಞಾನ, ತಂತ್ರಜ್ಞಾನ ಮತ್ತು ಸಾಗಣೆಯಂತಹ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರ ನೀಡಲಿವೆ ಎಂದು ಅವರು ತಿಳಿಸಿದರು.

<><><>

ದೇಶದ ವಿವಿಧ ಭಾಗಗಳಲ್ಲಿ ದಟ್ಟವಾದ ಮಂಜು ಕವಿದಿದ್ದು, ಗೋಚರತೆ ಕಡಿಮೆ ಇರುವುದರಿಂದ ಹಲವು ರೈಲುಗಳ ಸಂಚಾರಕ್ಕೆ ಅಡ್ಡಿಯಾಗಿದೆ. ಸುಮಾರು ೬೦ ರೈಲುಗಳು ಐದು ಗಂಟೆಗಳವರೆಗೆ ವಿಳಂಬವಾಗಿವೆ. ಪ್ರಯಾಣಿಕರು, ಮೊದಲೇ ರೈಲುಗಳ ಸ್ಥಿತಿಯನ್ನು ಪರಿಶೀಲಿಸುವಂತೆ ಭಾರತೀಯ ರೈಲ್ವೆ ಕೋರಿದೆ. ಇನ್ನೊಂದೆಡೆ, ಉತ್ತರ ಭಾರತದ ಕೆಲವು ಭಾಗಗಳಲ್ಲಿ ಮಂಜು ಮುಸುಕಿದ ವಾತಾವರಣ ಇರುವುದರಿಂದ ವಿಮಾನ ನಿಲ್ದಾಣದ ಕಾರ್ಯಾಚರಣೆಯ ಮೇಲೆ ಪರಿಣಾಮ ಬೀರಬಹುದು ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ.

<><><>

ಡಿಜಿಟಲ್ ರೂಪದಲ್ಲಿ ಕಾಯ್ದಿರಿಸದ ಟಿಕೆಟ್‌ಗಳನ್ನು ಬುಕ್ ಮಾಡುವ ಪ್ರಯಾಣಿಕರು ಪರಿಶೀಲನೆಯ ಸಮಯದಲ್ಲಿ ಬುಕಿಂಗ್‌ಗೆ ಬಳಸುವ ಅದೇ ಮೊಬೈಲ್ ಫೋನ್‌ನಲ್ಲಿ ಟಿಕೆಟ್ ಅನ್ನು ತೋರಿಸಬಹುದು ಮತ್ತು ಪ್ರಸ್ತುತ ಭೌತಿಕ ಮುದ್ರಣ ಅಗತ್ಯವಿಲ್ಲ ಎಂದು ಭಾರತೀಯ ರೈಲ್ವೆ ಸ್ಪಷ್ಟಪಡಿಸಿದೆ. ಭಾರತೀಯ ರೈಲ್ವೆ ಕಾಯ್ದಿರಿಸದ ರೈಲು ಟಿಕೆಟ್‌ಗಳ ಮುದ್ರಿತ ಪ್ರತಿಯನ್ನು ಕೊಂಡೊಯ್ಯುವುದನ್ನು ಕಡ್ಡಾಯಗೊಳಿಸಿದೆ ಎಂದು ಮಾಧ್ಯಮ ವರದಿಗಳು ಹೇಳಿಕೊಂಡ ನಂತರ ಈ ಸ್ಪಷ್ಟೀಕರಣ ಬಂದಿದೆ.

<><><>

ಗತಿ ಶಕ್ತಿ ವಿಶ್ವವಿದ್ಯಾಲಯವು ಸೇತುವೆ ಮತ್ತು ಸುರಂಗ ಎಂಜಿನಿಯರಿಂಗ್, ಕಡಲ ಅಧ್ಯಯನ, ರಕ್ಷಣಾ ಲಾಜಿಸ್ಟಿಕ್ಸ್ ಮತ್ತು ಸಮಗ್ರ ಸಾರಿಗೆ ಯೋಜನೆ ಸೇರಿದಂತೆ ನಿರ್ಣಾಯಕ ವಲಯಗಳಲ್ಲಿ

ತನ್ನ ಶೈಕ್ಷಣಿಕ ಗಮನವನ್ನು ಹೆಚ್ಚಿಸಲು ನಿರ್ಧರಿಸಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯ ರೈಲು ಭವನದಲ್ಲಿ ನಿನ್ನೆ ನಡೆದ ಗತಿ ಶಕ್ತಿ ವಿಶ್ವವಿದ್ಯಾಲಯ ನ್ಯಾಯಾಲಯದ ಎರಡನೇ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು ಈ ವಿಷಯ ತಿಳಿಸಿದರು.

<><><><>

ದುಬೈನಲ್ಲಿ ನಡೆದ ೧೯ ವರ್ಷದೊಳಗಿನ ಪುರುಷರ ಎಸಿಸಿ ಏಷ್ಯಾಕಪ್-೨೦೨೫ರ ಮೊದಲನೇ ಸೆಮಿಫೈನಲ್‌ನಲ್ಲಿ ಶ್ರೀಲಂಕಾ ವಿರುದ್ಧ ಭಾರತ ೮ ವಿಕೆಟ್‌ಗಳಿಂದ ಜಯಗಳಿಸಿ ಫೈನಲ್ ಪ್ರವೇಶಿಸಿದೆ. ಶ್ರೀಲಂಕಾ ನಿಗದಿತ ೨೦ ಒವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೩೮ ರನ್ ಗಳಿಸಿತ್ತು. ಈ ಗುರಿ ಬೆನ್ನತ್ತಿದ ಭಾರತ ೨ ವಿಕೆಟ್ ನಷ್ಟಕ್ಕೆ ೧೩೯ ರನ್ ಗಳಿಸಿ ಗೆಲುವಿನ ನಗೆ ಬೀರಿತು. ಇದೇ ೨೧ ರಂದು ನಡೆಯುವ ಫೈನಲ್ ಪಂದ್ಯದಲ್ಲಿ ಭಾರತ ತಂಡವು ಪಾಕಿಸ್ತಾನವನ್ನು ಎದುರಿಸಲಿದೆ.

<><><><>

ಪುರುಷರ ಕ್ರಿಕೆಟ್‌ನಲ್ಲಿ, ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಐದನೇ ಮತ್ತು ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಪಂದ್ಯ ಇಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಪ್ರಗತಿಯಲ್ಲಿದೆ. ಮೊದಲು ಟಾಸ್ ಗೆದ್ದು ದಕ್ಷಿಣ ಆಫ್ರಿಕಾ ಫಿಲ್ಡಿಂಗ್ ಆಯ್ದುಕೊಂಡಿದೆ. ಇತ್ತೀಚಿನ ವರದಿ ಬಂದಾಗ ಭಾರತ ೫ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೫೬ ರನ್ ಗಳಿಸಿ ಆಡುತ್ತಿದೆ.

<><><><>

ಜಾಗತಿಕ ಮಟ್ಟದಲ್ಲಿ ಸುಸ್ಥಿರ ಬೆಳವಣಿಗೆ, ಆರ್ಥಿಕ ಸ್ಥಿತಿಸ್ಥಾಪಕತ್ವ ಮತ್ತು ಭೌಗೋಳಿಕ ರಾಜಕೀಯ ಹೊಂದಾಣಿಕೆಗೆ ಇಂಧನ ಪರಿವರ್ತನೆ ಅತ್ಯಗತ್ಯವಾದ್ದರಿಂದ ಭಾರತ ಹಸಿರು ಮತ್ತು ಶುದ್ಧ ಇಂಧನವನ್ನು ಅಳವಡಿಸಿಕೊಳ್ಳಬೇಕು ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>